ಬ್ರಹ್ಮಾವರ ಸಕ್ಕರೆ ಕಾರ್ಖಾನೆ ನಷ್ಟದಲ್ಲಿರುವ ಬಗ್ಗೆ.

1820. ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) : ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದಕ್ಷಿಣ ಕನ್ನಡದಲ್ಲಿರುವ ಏಕೈಕ ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಈಗ ನಷ್ಟದಲ್ಲಿದೆಯೆ ;

ಆ) ಈ ಕಾರ್ಖಾನೆ ಚುರುಕಾಗಿ ಕಾರ್ಯ ನಿರ್ವಹಿಸುವಂತೆ ಸರ್ಕಾರ ಯಾವ ರೀತಿಯ ನೆರವನ್ನು ನೀಡಲು ಉದ್ದೇಶಿಸಿದೆ ;

ಇ) ಜಿಲ್ಲೆಯ ಕಬ್ಬು ಬೆಳೆಗಾರರಿಗೆ ಉಪಕಾರವಾಗುವ ಈ ಏಕೈಕ ಕಾರ್ಖಾನೆಯನ್ನು ಚೇತನಗೊಳಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೆ ?

ಶ್ರೀ ಎಸ್.ಆರ್. ಮೋರೆ (ಸಹಕಾರ ರಾಜ್ಯ ಸಚಿವರು) :

ಅ) ಹೌದು.

ಆ) ಕೇಂದ್ರ ಸರ್ಕಾರವು ಸಕ್ಕರೆ ಅಭಿವೃದ್ಧಿ ನಿಧಿಯಿಂದ ಮಂಜೂರು ಮಾಡಿರುವ ರೂ. 45.00 ಲಕ್ಷಗಳಿಗೆ ಖಾತರಿ ನಿಲ್ಲುವ ಹಾಗೂ ರೂ. 1.75 ಕೋಟಿ ನೆರವನ್ನು ಮಂಜೂರು ಮಾಡಬೇಕೆಂಬ ಕಾರ್ಖಾನೆಯ ಬೇಡಿಕೆಯ ಬಗೆಗಿನ ವಿಷಯಗಳು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಕಾರ್ಖಾನೆಯ ಪುನಃಶ್ಚೇತನದ ಸಾಧ್ಯಾಸಾಧ್ಯತೆಯ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆ.

ಹಸಿರು ಕಾರ್ಡು ಮತ್ತು ಇತರ ಕಾರ್ಡುಗಳನ್ನು ನೀಡಿರುವ ಬಗ್ಗೆ.

1922. ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ 1991ನೇ ಡಿಸೆಂಬರ್ ಅಖ್ಯೆರುವರೆಗೆ ಇರುವ ಹಸಿರು ಕಾರ್ಡು ಮತ್ತು ಇತರ ಕಾರ್ಡುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಸಿರು ಕಾರ್ಡು ಮತ್ತು ಇತರೆ ಕಾರ್ಡುಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

ಇ) ಸರಿಯಾಗಿ ಎಲ್ಲ ವರ್ಗದ ಜನರಿಗೆ ಕಾರ್ಡುಗಳು ದೊರೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) 31,14,608 ಹಸಿರು ಪಡಿತರ ಚೀಟಿಗಳು

27,28,677 ಕೇಸರಿ ಪಡಿತರ ಚೀಟಿಗಳು

21,69,929 ಇತರೆ ಕಾರ್ಡುಗಳು.